ಹಾಲಿ ಕೆಲವು ಕೊಳವೆ ಬಾವಿಗಳಿಗೆ ವಿದ್ಯುತ್ ಪಂಪ್ ಅಳವಡಿಸಿದೆ. ಕೆಟ್ಟಿರುವ ಕೊಳವೆ ಬಾವಿಗಳನ್ನು ದುರಸ್ತಿಗೊಳಿಸುವ ಮತ್ತು ಹೊಸದಾಗಿ ಕೊಳವೆ ಬಾವಿಗಳನ್ನು ಸಹ ತೋಡಲು ಉದ್ದೇಶಿಸಲಾಗಿದೆ.

ಆ) ಇಲ್ಲ.

ಇ) ಹೌದು.

ಬೆಂಗಳೂರು ಮಹಾನಗರಪಾಲಿಕೆಯಲ್ಲಿ ಪೌರಕಾರ್ಮಿಕರನ್ನು ನೇಮಿಸಿಕೊಳ್ಳುವುದು

261 - ಶ್ರೀ ಆರ್. ಕೃಷ್ಣಪ್ಪ : ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ವಕ್ಫ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ನಗರದಲ್ಲಿ ಹಾಲಿ ಕೆಲಸ ಮಾಡುತ್ತಿರುವ ಪೌರ ಕಾರ್ಮಿಕರ ಸಂಖ್ಯೆ ಎಷ್ಟು?

ಆ) ಬೆಂಗಳೂರು ನಗರವನ್ನು ಪ್ರತಿ ದಿನವೂ ಸ್ವಚ್ಛಗೊಳಿಸಲು ಬೇಕಾಗುವ ಪೌರ ಕಾರ್ಮಿಕರ ಸಂಖ್ಯೆ ಎಷ್ಟು?

ಇ) ಅವಶ್ಯಕವಾಗಿ ಬೇಕಾಗಿರತಕ್ಕ ಸಂಖ್ಯೆಯಲ್ಲಿ ಪೌರ ಕಾರ್ಮಿಕರನ್ನು ನೇಮಿಸಿಕೊಳ್ಳಲು ಸರ್ಕಾರ ಕ್ರಮ ತೆಗೆದುಕೊಳ್ಳುತ್ತದೆಯೇ?

ಶ್ರೀ ಆರ್. ರೋಷನ್ ಬೇಗ್ (ಬೆಂಗಳೂರು ಅಭಿವೃದ್ಧಿ ಮತ್ತು ವಕ್ಫ್‌ರಾಜ್ಯ ಸಚಿವರು) :

ಅ) 6202.

ಆ) ಸುಮಾರು 10,000 ಅನೇಕ ಬಡಾವಣೆಗಳ ಸ್ವಚ್ಚತ ಕಾರ್ಯವನ್ನು ಟೆಂಡರ್ ಆಧಾರದ ಮೇಲೆ ಖಾಸಗಿ ಗುತ್ತಿಗೆದಾರರಿಗೆ ವಹಿಸಲಾಗಿದೆ.

ಇ) ಪ್ರಸ್ತಾವನೆ ಪರಿಶೀಲನೆಯಲ್ಲಿರುತ್ತದೆ.

ಹೇಮಾವತಿ-ನೇತ್ರಾವತಿ ನದಿ ಸಂಪರ್ಕ ಕಲ್ಪಿಸುವುದು

262 - ಶ್ರೀ ಆರ್. ಕೃಷ್ಣಪ್ಪ (ಜಯಮಹಲ್) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನೇತ್ರಾವತಿ-ಹೇಮಾವತಿ ನದಿ ಜೋಡಣೆ ಮಾಡಿ, ಸಂಪರ್ಕ ಕಲ್ಪಿಸುವ ಬಗ್ಗೆ ರಾಷ್ಟ್ರೀಯ ಜಲ ಅಭಿವೃದ್ಧಿ ಸಂಸ್ಥೆ ಸಮೀಕ್ಷೆ ನಡೆಸಿ, ಸಲ್ಲಿಸಿರುವ ವರದಿಯನ್ನು ಕೇಂದ್ರ ಸರ್ಕಾರ ರಾಜ್ಯಕ್ಕೆ ಕಳುಹಿಸಿದೆಯೇ?

ಆ) ಹಾಗಿದ್ದಲ್ಲಿ ಇದಕ್ಕೆ ತಗಲುವ ವೆಚ್ಚ ಎಷ್ಟು? ಹಾಗೂ ವರದಿಯ ಮೇಲೆ ಸರ್ಕಾರ ಕೈಗೊಳ್ಳುವ ಕ್ರಮಗಳೇನು?

ಶ್ರೀ ಹೆಚ್.ಡಿ. ದೇವೇಗೌಡ (ಮುಖ್ಯಮಂತ್ರಿಗಳು) :

ಅ) ಹೌದು.